ದಿನಾಂಕಃ 07/10/2021 ರಂದು ಸಾಕ್ಷಿಯನ್ನು ಪುನಃ ಕರೆಸಿಯಿಸಿ ಪ್ರಮಾಣೀಕರಿಸಲಾಯಿತು.

**ಮುಂ.ಪಾಟೀ ಸವಾಲುಃ 7 ರಿಂದ 9 ನೇ ಪ್ರತಿವಾದಿಗಳ ಪರ ಶ್ರೀ ಎನ್ ವಾಯ್ ಪಿ ವಕೀಲರಿಂದಃ**

1. ನನ್ನ ಚಿಕ್ಕಪ್ಪ ಸಾಯುವ ಏಂಟೆತ್ತು ವರ್ಷಗಳ ಹಿಂದಿನಿಂದ ಅನಾರೋಗ್ಯದಿಂದ ಬಳಲುತಿದ್ದರು ಎಂದರೆ ಸರಿ. ನನ್ನ ಚಿಕ್ಕಪ್ಪನಿಗೆ ಪಾರ್ಶ್ವವಾಯು ಆಯಿತು ಎಂದರೆ ಸರಿಯಲ್ಲ. ಆದರೆ ಅನಾರೋಗ್ಯದಿಂದ ಹಾಸಿಗೆ ಹಿಡಿದಿದ್ದರು. ನನ್ನ ಚಿಕ್ಕಪ್ಪನಿಗೆ ಮಾತನಾಡಲು ಆಗುತ್ತಿರಲಿಲ್ಲ ಮತ್ತು ಜನರನ್ನು ಗುರುತು ಹಿಡಿಯುತ್ತಿರಲಿಲ್ಲ. ನನ್ನ ಚಿಕ್ಕಪ್ಪ ಹಾಸಿಗೆ ಹಿಡಿದಿರುವುದನ್ನು ದುರುಪಯೋಗಪಡಿಸಿಕೊಂಡು ನಮ್ಮ ತಂದೆ ಮೃತ್ಯು ಪತ್ರ ಬರೆಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಆದರೆ ಆಸ್ತಿಗಳು ಜಂಟಿಯಾಗಿ ಇದ್ದವು. ನನ್ನ ಚಿಕ್ಕಪ್ಪ 1 ಮತ್ತು 2 ನೇ ಪ್ರತಿವಾದಿಗಳ ಹೆಸರಿಗೆ ಯಾವುದೇ ಮೃತ್ಯು ಪತ್ರ ಬರೆದಿಲ್ಲ ಎಂದರೆ ಸರಿಯಲ್ಲ. ನನ್ನ ಚಿಕ್ಕಪ್ಪ ಹಾಸಿಗೆ ಹಿಡಿದಿರುವುದನ್ನು ದುರುಪಯೋಗಪಡಿಸಿಕೊಂಡು 1 ಮತ್ತು 2 ನೇ ಪ್ರತಿವಾದಿಗಳಿಗೆ ಮೃತ್ಯು ಪತ್ರ ಬರೆದಿದೆ ಎಂದು ಖೊಟ್ಟಿ ದಾಖಲೆ ಸೃಷ್ಟಿ ಮಾಡಿಕೊಂಡಿರುತ್ತೇವೆ ಎಂದರೆ ಸರಿಯಲ್ಲ. ನಮ್ಮ ತಂದೆ ಯಾರಿಗೂ ದಾನ ಪತ್ರ ಬರೆದುಕೊಟ್ಟಿಲ್ಲ ಎಂದರೆ ಸರಿ. ನಮ್ಮ ತಂದೆ ಮತ್ತು 7 ರಿಂದ 9 ನೇ ಪ್ರತಿವಾದಿಗಳ ನಡುವೆ ದಾವಾ ಆಸ್ತಿಗೆ ಸಂಬಂಧಿಸಿದಂತೆ ಯಾವುದೇ ವಿಭಾಗ ಆಗಿಲ್ಲ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ**( 1 ರಿಂದ 3 ನೇ ಪ್ರತಿವಾದಿಗಳ ಪರ ವಕೀಲರು ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು, ಕೋರಿಕೆಯ ಮೇರೆಗೆ ಪಾಟೀ ಸವಾಲನ್ನು ಮುಂದೂಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದಂತೆ ನನ್ನ ಉಖ್ತಲೇಖನಕ್ಕೆ ದಿಃ07-10-2021 ರಂದು ಮಧ್ಯಾಹ್ನ 12ಃ30 ರಿಂದ 12ಃ41 ಗಂಟೆಯವರೆಗೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೆ ಸರಿ ಇದೆ

Sd/-

ಹಿರಿಯ ದಿವಾಣಿ ನ್ಯಾಯಾಧೀಶರು,

ಕುಂದಗೋಳ.